# ರಾಜಧಾನಿಯಲ್ಲಿ ಅವಳಿ ಗೋಪುರ

ಉಷಾ 6/3/20

## ಎಲ್ಲ ಇಲಾಖೆಗಳು, ನಿಗಮ- ಮಂಡಳಿಗಳಿಗೆ ಏಕರೂಪದ ಅನುಸೂಚಿ ದರ ರೂಪಿಸಿ ಜಾರಿ


ರಾಜಧಾನಿಯ ಹೃದಯ ಭಾಗದಲ್ಲಿ ಸರ್ಕಾರಿ ಕಚೇರಿಗಳೆಲ್ಲ ಒಂದೇ ಕಡೆ ಇರುವಂತೆ 400 ಕೋಟಿ ರೂ. ವೆಚ್ಚದಲ್ಲಿ ಅವಳಿ ಗೋಪುರ ನಿರ್ಮಾಣ ಯೋಜನೆ ಘೋಷಿಸಲಾಗಿದೆ.

ಬೆಂಗಳೂರಿನ ಆನಂದರಾವ್ ವೃತ್ತದಲ್ಲಿ ಸರ್ಕಾರಿ ಕಚೇರಿಗಳನ್ನು ಒಂದೇ ಕಟ್ಟಡದಲ್ಲಿ ಅವಕಾಶ ಕಲ್ಪಿಸಲು ಉದ್ದೇಶಿಸಿದೆ. ಅದರಂತೆ 25 ಅಂತಸ್ತಿನ ಬಹುಮಹಡಿ ಅವಳಿ ಗೋಪುರ ನಿರ್ಮಾಣಕ್ಕೆ ಆಯವ್ಯಯದಲ್ಲಿ ವಿಸ್ತೃತ ಯೋಜನಾ ವರದಿ ಸಿದ್ಧಪಡಿಸುವುದಾಗಿ ಪ್ರಕಟಿಸಿದೆ.

ರಾಜ್ಯದ ನಾನಾ ಇಲಾಖೆಗಳು ಆಯಾ ಇಲಾಖೆಯ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಪ್ರತ್ಯೇಕ ಅನುಸೂಚಿ ದರಗಳನ್ನು (ಶೆಡ್ಯೂಲ್ ರೇಟ್) ಸಿದ್ಧಪಡಿಸಲಾಗುತ್ತಿದೆ. ಇದರಿಂದ ಒಂದೇ ಪ್ರದೇಶದಲ್ಲಿ ಒಂದೇ ಕಾಮಗಾರಿಗೆ ಪ್ರತ್ಯೇಕ ಅನುಸೂಚಿ ದರಗಳನ್ನು ಪರಿಗಣಿಸಲಾಗುತ್ತಿದೆ. ಎಲ್ಲ ಇಲಾಖೆಗಳು ಹಾಗೂ ನಿಗಮ- ಮಂಡಳಿಗಳಿಗೆ ಏಕರೂಪದ ಅನುಸೂಚಿ ದರಗಳನ್ನು ರೂಪಿಸಿ ಜಾರಿಗೊಳಿಸುವುದಾಗಿ ಬಜೆಟ್‌ನಲ್ಲಿ ತಿಳಿಸಲಾಗಿದೆ.

ಧಾರವಾಡ- ಬೆಳಗಾವಿ ನಡುವೆ ಕಿತ್ತೂರಿನ ಮೂಲಕ ನೂತನ ರೈಲು ಮಾರ್ಗ ನಿರ್ಮಾಣದಿಂದ ಧಾರವಾಡ- ಬೆಳಗಾವಿ ನಡುವಿನ ಅಂತರ 121 ಕಿ.ಮೀ.ನಿಂದ 73 ಕಿ.ಮೀ.ಗೆ ಇಳಿಯಾಗುತ್ತದೆ. ಜತೆಗೆ ಪ್ರಯಾಣ ಅವಧಿಯಲ್ಲಿ ಕನಿಷ್ಠ ಒಂದು ಗಂಟೆ ಉಳಿತಾಯವಾಗುತ್ತದೆ. ಆದ್ದರಿಂದ ಈ ನೂತನ ರೈಲು ಮಾರ್ಗ ಯೋಜನೆಗೆ ಉಚಿತವಾಗಿ ಭೂಮಿ ನೀಡಲು ಹಾಗೂ ಶೇ. 50ರಷ್ಟು ಕಾಮಗಾರಿ ವೆಚ್ಚವನ್ನು ಭರಿಸುವುದಕ್ಕೆ ರಾಜ್ಯ ಸರ್ಕಾರ ಒಪ್ಪಿಗೆ ನೀಡಿದೆ ಎಂದು ಆಯವ್ಯಯದಲ್ಲಿ ದಾಖಲಿಸಲಾಗಿದೆ.

ಹಾಗೆಯೇ ಹಾಸನ- ಮಂಗಳೂರು ರೈಲು ಅಭಿವೃದ್ಧಿ ನಿಗಮವು ಸಕಲೇಶಪುರ, ಸುಬ್ರಹ್ಮಣ್ಯ ನಿಲ್ದಾಣಗಳ ನಡುವಿನ ಘಾಟಿ ಪ್ರದೇಶದ ರೈಲು ಮಾರ್ಗದ ಕ್ಷಮತೆ (ವೇಗ) ಹೆಚ್ಚಿಸುವ ಕಾಮಗಾರಿ ನಡೆಸಲು ಉದ್ದೇಶಿಸಿದೆ. ಇದರಿಂದ ಬೆಂಗಳೂರು- ಮಂಗಳೂರಿನ ನಡುವಿನ ರೈಲುಗಳ ವೇಗ ಹೆಚ್ಚುವುದಲ್ಲದೇ ಹೆಚ್ಚುವರಿ ರೈಲು ಸೇವೆ ಆರಂಭಿಸುವ ವಿಶ್ವಾಸ ವ್ಯಕ್ತಪಡಿಸಿದೆ. ಲೋಕೋಪಯೋಗಿ ಇಲಾಖೆಗೆ ಆಯವ್ಯಯದಲ್ಲಿ 11,463 ಕೋಟಿ ರೂ. ಅನುದಾನ ಕಾಯ್ದಿರಿಸಲಾಗಿದ್ದು, ಚಾಲ್ತಿ ಕಾಮಗಾರಿಗಳಿಗೆ ಹೆಚ್ಚಿನ ಹಣ ವಿನಿಯೋಗವಾಗುವ ಸಾಧ್ಯತೆ ಇದೆ.



ಸಾಂದರ್ಭಿಕ ಚಿತ್ರ

**25**

25 ಅಂತಸ್ತಿನ ಬಹುಮಹಡಿ ಅವಳಿ ಗೋಪುರ ನಿರ್ಮಾಣಕ್ಕೆ ಆಯವ್ಯಯದಲ್ಲಿ ವಿಸ್ತೃತ ಯೋಜನಾ ವರದಿ.

**400**

ಆನಂದರಾವ್ ಸರ್ಕಲ್‌ನಲ್ಲಿ 400 ಕೋಟಿ ರೂ. ವೆಚ್ಚದಲ್ಲಿ ಅವಳಿ ಗೋಪುರ ನಿರ್ಮಾಣ ಯೋಜನೆ ಘೋಷಣೆ

### ನೂತನ ರೈಲು ಮಾರ್ಗ

- ಧಾರವಾಡ- ಬೆಳಗಾವಿ ನಡುವೆ ಕಿತ್ತೂರಿನ ಮೂಲಕ ನೂತನ ರೈಲು ಮಾರ್ಗ ನಿರ್ಮಾಣ
- ಹಿಂದುಳಿದ ತಾಲೂಕುಗಳ ಅಭಿವೃದ್ಧಿ, ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ 5,060 ಕೋಟಿ ರೂ. ಅನುದಾನ
- ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ 1,500 ಕೋಟಿ ರೂ. ಮೀಸಲು

### ಪ್ರಾದೇಶಿಕ ಸಮತೋಲನ ಕಸರತ್ತು

ಪ್ರಾದೇಶಿಕ ಅಸಮಾನತೆ ನಿವಾರಿಸಿ ಸಮಗ್ರ ಕರ್ನಾಟಕದ ಅಭಿವೃದ್ಧಿಗೆ ಒತ್ತು ನೀಡುವ ನಿಟ್ಟಿನಲ್ಲಿ ಹಿಂದುಳಿದ ತಾಲೂಕುಗಳ ಅಭಿವೃದ್ಧಿ, ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಬರೋಬ್ಬರಿ 5,060 ಕೋಟಿ ರೂ. ಅನುದಾನ ಘೋಷಿಸಲಾಗಿದೆ. ರಾಜ್ಯದ ಪ್ರಾದೇಶಿಕ ಅಸಮಾನತೆ ನಿವಾರಣೆ ಸರ್ಕಾರದ ಪ್ರಮುಖ ಆದ್ಯತೆ ಎಂದಿರುವ ಮುಖ್ಯಮಂತ್ರಿ ಯಡಿಯೂರಪ್ಪ ಅವರು ಈ ಯೋಜನೆಗೆ 2020-21ನೇ ಸಾಲಿನಲ್ಲಿ 3060 ಕೋಟಿ ರೂ. ಅನುದಾನ ಘೋಷಿಸಿದ್ದಾರೆ. ಹೈದರಾಬಾದ್ ಕರ್ನಾಟಕ ಭಾಗವನ್ನು ಕಲ್ಯಾಣ ಕರ್ನಾಟಕ ಎಂದು ಮರುನಾಮಕರಣ ಮಾಡಿದ್ದ ಯಡಿಯೂರಪ್ಪ ಅವರು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ 1,500 ಕೋಟಿ ರೂ. ಕಾಯ್ದಿರಿಸಿದ್ದಾರೆ.

### ಮಾನವ ಸಂಪನ್ಮೂಲಕ್ಕೆ 500 ಕೋಟಿ

ಕಲ್ಯಾಣ ಕರ್ನಾಟಕ ಸರ್ವತೋಮುಖ ಅಭಿವೃದ್ಧಿ ದೃಷ್ಟಿಯಿಂದ ಕಲ್ಯಾಣ ಕರ್ನಾಟಕ ಮಾನವ ಸಂಪನ್ಮೂಲ, ಕೃಷಿ ಹಾಗೂ ಸಾಂಸ್ಕೃತಿಕ ಸಂಘ ಹೊಸದಾಗಿ ರಚನೆಯಾಗಿದೆ. ಕಲ್ಯಾಣ ಕರ್ನಾಟಕ ಭಾಗದ ಆರು ಜಿಲ್ಲೆಗಳಲ್ಲಿ ಕೃಷಿ, ಶಿಕ್ಷಣ, ಆರೋಗ್ಯ, ಮಹಿಳಾ ಸಬಲೀಕರಣ, ಸ್ವಯಂ ಉದ್ಯೋಗ, ಯುವ ಸಬಲೀಕರಣ ಇತರೆ ವಲಯಗಳಲ್ಲಿ ಕಾರ್ಯಕ್ರಮಗಳನ್ನು ರೂಪಿಸಿ ಮಾನವ ಸಂಪನ್ಮೂಲ ಅಭಿವೃದ್ಧಿಗಾಗಿ 500 ಕೋಟಿ ರೂ. ಅನುದಾನ ಮೀಸಲಿಡಲಾಗಿದೆ.

## ಎರಡು ಕೆ.ಜಿ. ಹೆಚ್ಚುವರಿ ಅನ್ನಭಾಗ್ಯದ ಅಕ್ಕಿಗೆ ಕತ್ತರಿ?

ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರು ಮಂಡಿಸಿರುವ ಬಜೆಟ್‌ನಲ್ಲಿ ಆಹಾರ ಇಲಾಖೆಯ ಸಹಾಯಧನದಲ್ಲಿ 1,209 ಕೋಟಿ ರೂ. ಕಡಿತಗೊಳಿಸಲಾಗಿದ್ದು, ಇದರ ಪರಿಣಾಮವಾಗಿ ಸಿದ್ದರಾಮಯ್ಯ ಸರ್ಕಾರದ 'ಅನ್ನಭಾಗ್ಯ' ಯೋಜನೆಯಡಿ ನೀಡಲಾಗುತ್ತಿದ್ದ 2 ಕೆ.ಜಿ ಹೆಚ್ಚುವರಿ ಅಕ್ಕಿಗೆ ಕತ್ತರಿ ಬೀಳಲಿದೆ ಎಂಬ ಅನುಮಾನ ಮೂಡಿದೆ.

ಹೊಸ ಬಜೆಟ್ ಜಾರಿಗೆ ಬರುವ ದಿನದಿಂದ ಅಂದರೆ, ಏಪ್ರಿಲ್ ತಿಂಗಳಿಂದ ಅನ್ನಭಾಗ್ಯ ಯೋಜನೆಯ ಪ್ರತಿ ಫಲಾನುಭವಿಗೆ ತಲಾ ಏಳು ಕೆ.ಜಿ. ಅಕ್ಕಿ ಬದಲು 5 ಕೆ.ಜಿ ಅಕ್ಕಿ ಸಿಗಲಿದೆ. ಇದನ್ನು ಸರಿದೂಗಿಸಲು ಪ್ರತಿ ಕುಟುಂಬಕ್ಕೆ 2 ಕೆ.ಜಿ ಗೋಧಿ ನೀಡುವ ಪ್ರಸ್ತಾವನೆಯನ್ನು ಬಜೆಟ್‌ನಲ್ಲಿ ಮಾಡಲಾಗಿದೆ.

2019-20ನೇ ಸಾಲಿನಲ್ಲಿ ಆಹಾರ ಇಲಾಖೆಗೆ 3,755 ಕೋಟಿ ಸಹಾಯಧನ ನೀಡಲಾಗಿತ್ತು. 2020-21ನೇ ಸಾಲಿನ ಬಜೆಟ್‌ನಲ್ಲಿ 2,546 ಕೋಟಿ ರೂ. ಸಹಾಯಧನ ಪ್ರಸ್ತಾಪಿಸಲಾಗಿದೆ. ಹೀಗಾಗಿ ಕಳೆದ ಬಾರಿಗಿಂತ 1,209 ಕೋಟಿ ಸಹಾಯಧನ ಕಡಿತಗೊಳಿಸಲಾಗಿದೆ. ಇದರ ನೇರ ಪರಿಣಾಮ ಅನ್ನಭಾಗ್ಯ ಅಕ್ಕಿಯ ಮೇಲೆ ಬೀಳಲಿದೆ ಎಂದು ಹೇಳಲಾಗುತ್ತಿದೆ. ಈಗ ಕೇಂದ್ರ ಸರ್ಕಾರದ ನಿಯಮದಂತೆ 5 ಕೆ.ಜಿ. ಅಕ್ಕಿ ನೀಡಲು ತೀರ್ಮಾನಿಸಿರುವುದರಿಂದ ಹೆಚ್ಚುವರಿ ವೆಚ್ಚದ ಅವಶ್ಯಕತೆಯಿಲ್ಲ. ಆದ್ದರಿಂದ ಸಹಾಯಧನ ಸಹಜವಾಗಿ ಕಡಿಮೆಯಾಗಲಿದೆ ಎಂದು ಆಹಾರ ಇಲಾಖೆಯ ಅಧಿಕಾರಿಗಳು ಸಮಜಾಯಿಷಿ ನೀಡುತ್ತಾರೆ.

### 2 ಕೆ.ಜಿ. ಗೋಧಿ

ಅನ್ನಭಾಗ್ಯ ಯೋಜನೆಯಡಿ ಬಿಪಿಎಲ್ ಕುಟುಂಬದ ಪ್ರತಿ ಸದಸ್ಯನಿಗೆ ಈವರೆಗೆ ನೀಡಲಾಗುತ್ತಿದ್ದ 7 ಕೆ.ಜಿ. ಅಕ್ಕಿಯಲ್ಲಿ 2 ಕೆ.ಜಿ. ಅಕ್ಕಿಯನ್ನು ಕಡಿತಗೊಳಿಸಲಾಗಿದೆ. ಅದರ ಬದಲಿಗೆ ಪ್ರತಿ ಕುಟುಂಬಕ್ಕೆ 2 ಕೆ.ಜಿ. ಅಕ್ಕಿ ನೀಡಲಾಗುತ್ತದೆ. ಇದಕ್ಕಾಗಿ ವರ್ಷಕ್ಕೆ ಸುಮಾರು 880 ಕೋಟಿ ರೂ. ವೆಚ್ಚವಾಗಲಿದೆ. 2 ಕೆ.ಜಿ. ಅಕ್ಕಿಯನ್ನು ಬಿಪಿಎಲ್ ಕುಟುಂಬದ ಪ್ರತಿ ವ್ಯಕ್ತಿಗೆ ನೀಡಲಾಗುತ್ತಿದ್ದರೆ, 2 ಕೆ.ಜಿ ಗೋಧಿಯನ್ನು ಪ್ರತಿ ಕುಟುಂಬಕ್ಕೆ ಸಿಗಲಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

### ಬೋಗಸ್ ಕಾರ್ಡ್

ಅಕ್ಕಿಯ ಪ್ರಮಾಣ ಎರಡು ಕೆ.ಜಿ. ಕಡಿತ ಮಾಡಿ ಪ್ರತಿ ಕುಟುಂಬಕ್ಕೆ ಎರಡು ಕೆ.ಜಿ. ಗೋಧಿ ಹಾಗೂ ಒಂದು ಕೆ.ಜಿ. ತೊಗರಿಬೇಳೆ ನೀಡುವುದರಿಂದ ವಾರ್ಷಿಕ 480 ಕೋಟಿ ರೂ.ವರೆಗೆ ಉಳಿತಾಯವಾಗುತ್ತದೆ. ಜತೆಗೆ 10 ಲಕ್ಷದಷ್ಟು ಬೋಗಸ್ ಕಾರ್ಡ್‌ಗಳಿರುವ ಅಂದಾಜು ಮಾಡಲಾಗಿದ್ದು ಈಗಾಗಲೇ ಒಂದು ಲಕ್ಷ ಕಾರ್ಡ್ ಪತ್ತೆ ಹಚ್ಚಲಾಗಿದ್ದು ಐದು ಲಕ್ಷ ಕಾರ್ಡ್‌ಗಳು ಪತ್ತೆಯಾದರೂ 1000 ಕೋಟಿ ರೂ.ವರೆಗೆ ಉಳಿತಾಯವಾಗುತ್ತದೆ ಎಂಬ ಅಂದಾಜಿದೆ.